**Akashvani : Bangalore**
**Regional Bulletin In Kannada**
**06.06.2026 / 18.40 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**06.06.2026 / 18.40 hrs**

**<><*<><>*><>**

<u>ಮುಖ್ಯಾಂಶಗಳು</u>

**<><*<><>*><>**

**೧. ರಫ್ತು ಗುಣಮಟ್ಟದ ಉತ್ಪನ್ನ ತಯಾರಿಸುವ ಮೂಲಕ ಆರ್ಥಿಕ ಬೆಳವಣಿಗೆಗೆ ಕೊಡುಗೆ ನೀಡಲು ಉದ್ದಿಮೆಗಳಿಗೆ ಸಚಿವ ವಿ.ಸೋಮಣ್ಣ ಕರೆ**

**೨. ಕಾಂಗ್ರೆಸ್ ಪಕ್ಷದಿಂದ ರಾಜ್ಯಸಭಾ ಚುನಾವಣೆಗೆ ೩ ಹಾಗೂ ವಿಧಾನಪರಿಷತ್‌ಗೆ ೫ ಅಭ್ಯರ್ಥಿಗಳ ನಾಮಪತ್ರ ಸಲ್ಲಿಕೆ**

**೩. ಸಿಇಟಿ ಫಲಿತಾಂಶ ಪ್ರಕಟ; ೨ ಲಕ್ಷದ ೬೨ ಸಾವಿರ ವಿದ್ಯಾರ್ಥಿಗಳು ವಿವಿಧ ವೃತ್ತಿಪರ ಕೋರ್ಸ್‌ಗಳಿಗೆ ಅರ್ಹ**

**೪. ಖಾತೆ ಹಂಚಿಕೆಯ ರಾಜಕಾರಣದಿಂದಾಗಿ ಸರ್ಕಾರದ ಆಡಳಿತ ಯಂತ್ರ ಸ್ಥಗಿತ ವಿಪಕ್ಷ ನಾಯಕ ಆರ್.ಅಶೋಕ ಆರೋಪ**

**೫. ಬೆಂಗಳೂರು ಜಾಲಹಳ್ಳಿ ವಾಯುಪಡೆ ತರಬೇತಿ ಶಾಲೆಯಿಂದ ೩ ಸಾವಿರದ ೧೪೭ ಅಗ್ನಿವೀರರ ನಿರ್ಗಮನ ಪಥ ಸಂಚಲನ**

**<><*<><>*><>**

ಕೈಗಾರಿಕೆಗಳು ಬೇಡಿಕೆಗೆ ಅನುಗುಣವಾದ ಗುಣಮಟ್ಟದ ಉತ್ಪನ್ನಗಳನ್ನು ತಯಾರಿಸಿ ವಿದೇಶಗಳಿಗೆ ರಫ್ತು ಮಾಡುವ ಮೂಲಕ ಆರ್ಥಿಕ ಬೆಳವಣಿಗೆಗೆ ನೆರವಾಗಬೇಕು ಎಂದು ಕೇಂದ್ರ ಜಲಶಕ್ತಿ ಮತ್ತು ರೈಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ಕರೆ ನೀಡಿದ್ದಾರೆ. ಅವರು, ತುಮಕೂರಿನಲ್ಲಿಂದು ರಾಜ್ಯಮಟ್ಟದ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಗಳ ಸಮ್ಮೇಳನ ಉದ್ಘಾಟಿಸಿ ಮಾತನಾಡಿದರು. ಉತ್ಪಾದನೆ ಹಾಗೂ ಉದ್ಯೋಗ ಸೃಷ್ಟಿ

ಮೂಲಕ ಕೈಗಾರಿಕೆಗಳು ದೇಶದ ಅಭಿವೃದ್ಧಿಗೆ ದೊಡ್ಡ ಕೊಡುಗೆ ನೀಡುತ್ತಿದೆ. ಉದ್ದಿಮೆಗಳು ಜಾಗತಿಕ ಮಟ್ಟದ ಸ್ಪರ್ಧೆಗೆ ಸಜ್ಜಾಗಬೇಕು ಎಂದು ಅವರು ಹೇಳಿದರು. ಶಕ್ತಿಯುತ ಭಾರತ ನಿರ್ಮಾಣದಲ್ಲಿ ಕೈಗಾರಿಕೆಗಳು ಮತ್ತು ವಾಣಿಜ್ಯ ಸಂಸ್ಥೆಗಳು ಸಹಕರಿಸುತ್ತಿವೆ, ಪ್ರಧಾನಿ ನರೇಂದ್ರ ಮೋದಿಯವರು ವಾಣಿಜ್ಯ ಮತ್ತು ಕೈಗಾರಿಕೆಗಳ ಬೆಳವಣಿಗೆಗೆ ಪೂರಕವಾದ ಯೋಜನೆಗಳನ್ನು ರೂಪಿಸಿದ್ದಾರೆ ಎಂದು ಸಚಿವ ಸೋಮಣ್ಣ ಅಭಿಪ್ರಾಯಪಟ್ಟರು. ತುಮಕೂರು ಬಳಿ ಕೈಗಾರಿಕೆಗಳ ಸ್ಥಾಪನೆಗೆ ಅಪಾರ ಅವಕಾಶಗಳಿವೆ. ಶಿರ ಹಾಗೂ ದಾಬಸ್‌ಪೇಟೆ ಕೈಗಾರಿಕಾ ಪ್ರದೇಶದಲ್ಲಿ ಉದ್ದಿಮೆಗಳ ಸ್ಥಾಪನೆಯಿಂದ ತುಮಕೂರಿನ ಬೆಳವಣಿಗೆಗೆ ಸಹಾಯವಾಗುತ್ತದೆ ಎಂದು ಅವರು ಹೇಳಿದರು. ಕೈಗಾರಿಕೆಗಳು ಕಾರ್ಮಿಕರ ಹಿತ ರಕ್ಷಿಸಬೇಕು ಎಂದು ಸಚಿವ ಸೋಮಣ್ಣ ಈ ಸಂದರ್ಭದಲ್ಲಿ ಕೈಗಾರಿಕೋದ್ಯಮಗಳಿಗೆ ಕರೆ ನೀಡಿದರು.

**<><*<><>*><>**

ರಾಜ್ಯಸಭಾ ಚುನಾವಣೆಗೆ ೩ ಹಾಗೂ ವಿಧಾನ ಪರಿಷತ್ ಚುನಾವಣೆಗೆ ೫ ಅಭ್ಯರ್ಥಿಗಳನ್ನು ಕಣಕ್ಕೆ ಇಳಿಸಲಾಗಿದೆ ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಬೆಂಗಳೂರಿನಲ್ಲಿ ಇಂದು ತಿಳಿಸಿದ್ದಾರೆ.  ವಿಧಾನ ಪರಿಷತ್ತಿನ ಸ್ಥಾನಗಳಿಗಾಗಿ ಇಂದು ಐವರು ಅಭ್ಯರ್ಥಿಗಳ ನಾಮಪತ್ರ ಸಲ್ಲಿಕೆ ಮಾಡಲಾಗಿದೆ. ರಾಜ್ಯಸಭೆ ಚುನಾವಣೆಗಾಗಿ ನಿನ್ನೆ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ನಾಮಪತ್ರ ಸಲ್ಲಿಸಿದ್ದರು. ಕಾಂಗ್ರೆಸ್ ರಾಷ್ಟ್ರೀಯ ವಕ್ತಾರರಾದ ಪವನ್ ಖೇರಾ ಅವರನ್ನು ರಾಜ್ಯದಿಂದ ಕಣಕ್ಕೆ ಇಳಿಸಲಾಗಿದೆ. ಜೊತೆಗೆ ಎಐಸಿಸಿ ಕಾರ್ಯದರ್ಶಿ, ಯುವ ಮುಖಂಡ ಮನ್ಸೂರ್ ಅಲಿ ಖಾನ್ ಅವರಿಗೂ ಅವಕಾಶ ನೀಡಲಾಗಿದೆ ಎಂದು ಡಿ.ಕೆ.ಶಿವಕುಮಾರ್ ತಿಳಿಸಿದರು.

**<><*<><>*><>**

ತುರುವೆಕೆರೆ ತಾಲೂಕಿನ ಮಲ್ಲಘಟ್ಟ ಸುತ್ತಮುತ್ತ ಸುಮಾರು ೩೫ ಕೋಟಿ ರೂಪಾಯಿ ವೆಚ್ಚದಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿ ಕೈಗೊಳ್ಳಲಾಗಿದೆ ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ. ಮುಖ್ಯಮಂತ್ರಿ ಆದ ಬಳಿಕ ಇದೇ ಮೊದಲ ಬಾರಿಗೆ ತುಮಕೂರು ಜಿಲ್ಲೆಗೆ ಇಂದು ಭೇಟಿ ನೀಡಿದ ಅವರು, ಮಲ್ಲಘಟ್ಟದ ಗಂಗಾಧರೇಶ್ವರ

ದೇವಾಲಯದಲ್ಲಿ ಪೂಜೆ ಸಲ್ಲಿಸಿ ಸುದ್ದಿಗಾರರೊಂದಿಗೆ ಮಾತನಾಡಿದರು. ಸ್ಥಳೀಯ ಸಂಸ್ಥೆಗಳ ಪ್ರತಿನಿಧಿಗಳು ಹಾಗೂ ಸಂಬಂಧಪಟ್ಟವರ ಸಲಹೆ ಪಡೆದು ಅಭಿವೃದ್ಧಿ ಕಾರ್ಯ ಕೈಗೊಳ್ಳಲಾಗುವುದು ಎಂದು ಈ ಸಂದರ್ಭದಲ್ಲಿ ಅವರು ಭರವಸೆ ನೀಡಿದರು.

**<><*<><>*><>**

ಇಂದು ಸಾಮಾನ್ಯ ಪ್ರವೇಶ ಪರೀಕ್ಷೆ- ಸಿಇಟಿ ಫಲಿತಾಂಶ ಪ್ರಕಟವಾಗಿದ್ದು ಈ ಬಾರಿ ಒಟ್ಟು ೨ ಲಕ್ಷದ ೬೨ ಸಾವಿರ ವಿದ್ಯಾರ್ಥಿಗಳು ವಿವಿಧ ವೃತ್ತಿಪರ ಕೋರ್ಸ್‌ಗಳಿಗೆ ಅರ್ಹತೆ ಪಡೆದಿದ್ದಾರೆ. ಬೆಂಗಳೂರಿನಲ್ಲಿ ಇಂದು ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಕಚೇರಿಯಲ್ಲಿ ವೈದ್ಯಕೀಯ ಶಿಕ್ಷಣ ಸಚಿವ ಡಾ.ಶರಣು ಪ್ರಕಾಶ್ ಪಾಟೀಲ್ ಸುದ್ದಿಗೋಷ್ಠಿಯಲ್ಲಿ ಫಲಿತಾಂಶ ಪ್ರಕಟಿಸಿದರು.

**ಧ್ವನಿ: ವೈದ್ಯಕೀಯ ಶಿಕ್ಷಣ ಸಚಿವ ಶರಣು ಪ್ರಕಾಶ್ ಪಾಟೀಲ್ ( ೨೨ ಸೆಕೆಂಡ್ಸ್)**

ಇಂಜಿನಿಯರಿಂಗ್ ವಿಭಾಗದಲ್ಲಿ ತನಿಷಾ ಪ್ರಥಮ ರ್‍ಯಾಂಕ್ ಪಡೆದು ರಾಜ್ಯಕ್ಕೆ ಅಗ್ರಸ್ಥಾನ ಪಡೆದಿದ್ದಾರೆ. ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಕಾರ್ಯನಿರ್ವಾಹಕ ನಿರ್ದೇಶಕ ಹೆಚ್. ಪ್ರಸನ್ನ ಅಭ್ಯರ್ಥಿಗಳು ಆನ್‌ಲೈನ್ ಮೂಲಕ ತಮ್ಮ ಅಂಕಪಟ್ಟಿ ಮತ್ತು ರ್‍ಯಾಂಕ್ ಅನ್ನು ವೀಕ್ಷಿಸಬಹುದಾಗಿದೆ ಎಂದು ಮಾಹಿತಿ ನೀಡಿದರು. ಸಿಇಟಿ ಪರೀಕ್ಷೆಯು ಇದೇ ಏಪ್ರಿಲ್ ೨೨, ೨೩, ೨೪ನೇ ತಾರೀಕಿನಂದು ನಡೆದಿತ್ತು.

**<><*<><>*><>**

ಸಿಇಟಿ ಪರೀಕ್ಷೆಯ ಎಂಜಿನಿಯರಿಂಗ್ ವಿಭಾಗದ ಮೊದಲ ೧೦ ರ್‍ಯಾಂಕ್‌ಗಳಲ್ಲಿ ನಾಲ್ಕು ದಕ್ಷಿಣ ಕನ್ನಡ ಜಿಲ್ಲೆಗೆ ಲಭಿಸಿವೆ. ಮಂಗಳೂರಿನ ಇರಾ ಜೈನ್ ನಾಲ್ಕನೇ ರ್‍ಯಾಂಕ್, ರಿಶೋನ್ ಫೆರ್ನಾಂಡಿಸ್ ಐದನೇ ರ್‍ಯಾಂಕ್ ಪಡೆದಿದ್ದಾರೆ. ಚಿನ್ಮಯ್ ಜಿ.ಕೆ ಏಳನೇ ರ್‍ಯಾಂಕ್ ಹಾಗೂ ಅಭಿ ಸಣ್ಣಯ್ಯ ೮ನೇ ರ್‍ಯಾಂಕ್ ಗಳಿಸಿದ್ದಾರೆ. ಕೃಷಿ ವಿಜ್ಞಾನದಲ್ಲಿ ಮಂಗಳೂರಿನ ಸಮಯ್ ಎ.ಎಸ್ ಮೂರನೇ ರ್‍ಯಾಂಕ್, ರಿಷಿಕಾ ಕೆ.ಎಸ್ ನಾಲ್ಕನೇ ರ್‍ಯಾಂಕ್ ಹಾಗೂ ಶ್ರೇಯಾ ಬಲ್ಲಾಳ್ ನಿಡಂಬೂರುಗೆ ೬ನೇ ರ್‍ಯಾಂಕ್ ಲಭಿಸಿದೆ. ರಿಷಭ್ ಶೆಟ್ಟಿ ಬಿಎಸ್ಸಿ ನರ್ಸಿಂಗ್‌ನಲ್ಲಿ ೮ನೇ ರ್‍ಯಾಂಕ್, ದೀಕ್ಷಾ ಶೆಣೈ ಯೋಗ ಮತ್ತು

ನ್ಯಾಚುರೊಪತಿಯಲ್ಲಿ ೬ನೇ ರ್‍ಯಾಂಕ್ ಗಳಿಸಿದರೆ, ಬಿ.ಫಾರ್ಮ ಮತ್ತು ಡಿ.ಫಾರ್ಮದಲ್ಲಿ ರಿಶೋನ್ ಫೆರ್ನಾಂಡಿಸ್‌ಗೆ ೧೦ನೇ ರ್‍ಯಾಂಕ್ ಲಭಿಸಿದೆ.

<><*<><>*><>

ಕಾಂಗ್ರೆಸ್ ಒಳಜಗಳ ಹಾಗೂ ರಾಜ್ಯ ಸರ್ಕಾರದ ಮಂತ್ರಿಗಳ ಖಾತೆ ಹಂಚಿಕೆಯ ರಾಜಕಾರಣಗಳಿಂದಾಗಿ ಕಳೆದ ಹಲವು ವಾರಗಳಿಂದ ಆಡಳಿತ ಯಂತ್ರ ಸಂಪೂರ್ಣ ಸ್ಥಗಿತಗೊಂಡಿದೆ ಎಂದು ರಾಜ್ಯ ವಿಧಾನಸಭೆಯಲ್ಲಿನ ಪ್ರತಿಪಕ್ಷದ ನಾಯಕ ಆರ್.ಅಶೋಕ ಆಪಾದಿಸಿದ್ದಾರೆ. ಶೈಕ್ಷಣಿಕ ವರ್ಷ ಆರಂಭವಾಗಿದ್ದು, ವಿದ್ಯಾರ್ಥಿಗಳಿಗೆ ಪಠ್ಯ-ಪುಸ್ತಕ, ಶಾಲಾ-ಕೊಠಡಿ, ಶೌಚಾಲಯ ದುರಸ್ತಿ, ಶಿಕ್ಷಕರ ಕೊರತೆ, ಮೊದಲಾದ ಸಮಸ್ಯೆಗಳಿವೆ. ಮಳೆಗಾಲ ಆರಂಭವಾಗಿದ್ದು, ರೈತರು ಮುಂಗಾರು ಬಿತ್ತನೆಗೆ ಸಿದ್ಧತೆ ನಡೆಸಿದ್ದಾರೆ. ಬಿತ್ತನೆ ಬೀಜ ಲಭ್ಯತೆ, ರಸಗೊಬ್ಬರ ಪೂರೈಕೆ, ಬೆಳೆ ಸಾಲ ಮೊದಲಾದ ಆದ್ಯ ಗಮನ ನೀಡಬೇಕಾದ ವಿಚಾರಗಳಿವೆ. ಸರ್ಕಾರದಲ್ಲಿ ಈ ಇಲಾಖೆಗಳಿಗೆ ಸಂಬಂಧಿಸಿದ ಸಚಿವರಿಲ್ಲ ಎಂದು ಅಶೋಕ ಟೀಕಿಸಿದರು.

<><*<><>*><>

ಬೆಂಗಳೂರು ಜಾಲಹಳ್ಳಿ ವಾಯುಪಡೆ ತರಬೇತಿ ಶಾಲೆಯಲ್ಲಿ ಸತತ ೨೨ ವಾರಗಳ ವರೆಗೆ ಅತ್ಯಂತ ಕಠಿಣ ಹಾಗೂ ಪರಿಣಾಮಾತ್ಮಕ ತರಬೇತಿ ಪಡೆದ ಒಟ್ಟು ೩ ಸಾವಿರದ ೧೪೬ ಪ್ರಶಿಕ್ಷಣಾರ್ಥಿಗಳ ಆಕರ್ಷಕ ನಿರ್ಗಮನ ಪಥ ಸಂಚಲನ ಇಂದು ನಡೆಯಿತು. ಈ ಪ್ರಶಿಕ್ಷಣಾರ್ತಿಗಳು ಅಗ್ನಿವೀರ ವಾಯುಗಳಾಗಿ ವಾಯುಪಡೆಗೆ ಸೇರ್ಪಡೆಯಾಗಲಿದ್ದಾರೆ. ನಿರ್ಗಮನ ಪಥ ಸಂಚಲನ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ ಏರ್ ವೈಸ್ ಮಾರ್ಷಲ್ ಅತುಲ್ ಲಕ್ಷ್ಮಣ್ ದಾಸ್ ಮಾತನಾಡಿ, ಯಾವುದೇ ಪರಿಸ್ಥಿತಿಯನ್ನು ಎದುರಿಸುವ ಮನಸ್ಥಿತಿಯಲ್ಲಿ ಇರಬೇಕು ಎಂದು ಸೂಚಿಸಿದರು. ಅಗ್ನಿವೀರ ವಾಯುಗಳಾದ ನಾಗರಾಜ್ ಗೂಳಪ್ಪ ಚಿಂಚನೆ, ಪ್ರಿಯಾಂಶು ಗುಪ್ತಾ ಹಾಗೂ ಶೈಲೇಂದ್ರ ಕುಶ್ವಾಹ ಅತ್ಯುತ್ತಮ ಆಲ್‌ರೌಂಡರ್ ಗೌರವಕ್ಕೆ ಪಾತ್ರರಾದರು.

<><*<><>*><>

ವಿವಿಧ ಇಲಾಖೆಗಳಲ್ಲಿ ಇರುವ ಸೌಲಭ್ಯಗಳನ್ನು ನಿಯಮಾನುಸಾರ ಅಲ್ಪಸಂಖ್ಯಾತ ಸಮುದಾಯಗಳಿಗೆ ಸಮರ್ಪಕವಾಗಿ ಅಧಿಕಾರಿಗಳು ತಲುಪಿಸಬೇಕು ಎಂದು ರಾಜ್ಯ ಅಲ್ಪಸಂಖ್ಯಾತರ ಆಯೋಗದ ಅಧ್ಯಕ್ಷ ಯು.ನಿಸಾರ್ ಅಹಮದ್ ಸೂಚನೆ ನೀಡಿದ್ದಾರೆ. ಅವರು, ಚಾಮರಾಜನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಇಂದು ಪ್ರಧಾನಮಂತ್ರಿಗಳ ಹೊಸ ೧೫ ಅಂಶಗಳ ಕಾರ್ಯಕ್ರಮಕ್ಕೆ ಸಂಬಂಧಿಸಿದಂತೆ ಜಿಲ್ಲಾಮಟ್ಟದ ಅಧಿಕಾರಿಗಳೊಂದಿಗೆ ನಡೆದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಸರ್ಕಾರದ ಸೌಲಭ್ಯಗಳು ಅಲ್ಪಸಂಖ್ಯಾತ ಸಮುದಾಯ ವರ್ಗಗಳಿಗೆ ಯಾವುದೇ ವಿಳಂಬ ಮಾಡದೇ ನೀಡಬೇಕು ಎಂದು ಸೂಚಿಸಿದ ಅವರು, ಫಲಾನುಭವಿಗಳಿಗೆ ಯೋಜನೆಗಳನ್ನು ಹೇಗೆ ತಲುಪಿಸಲಾಗುತ್ತಿದೆ ಎಂಬ ಬಗ್ಗೆ ಅಲ್ಪಸಂಖ್ಯಾತ ಆಯೋಗ ಪರಿಶೀಲಿಸುತ್ತಿದೆ ಎಂದರು.

<><*<><>*><>

ಚಿಕ್ಕಮಗಳೂರು ಜಿಲ್ಲೆಯ ಮುಳ್ಳಯ್ಯನಗಿರಿ ಸೇರಿದಂತೆ ಪ್ರವಾಸಿ ತಾಣಗಳಲ್ಲಿ ಸಿ.ಸಿ.ಕ್ಯಾಮರಾಗಳನ್ನು ಅಳವಡಿಸುವಂತೆ ಜಿಲ್ಲಾಧಿಕಾರಿ ಭಂವರ್ ಸಿಂಗ್ ಮೀನಾ ಪ್ರವಾಸೋದ್ಯಮ ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಅವರು ಇಂದು ಮುಳ್ಳಯ್ಯನಗಿರಿ ಮತ್ತು ಸೀತಾಳಯ್ಯನಗಿರಿಗೆ ಭೇಟಿ ನೀಡಿ, ಅಲ್ಲಿನ ಮೂಲಭೂತ ಸೌಕರ್ಯಗಳ ಬಗ್ಗೆ ಪರಿಶೀಲನೆ ನಡೆಸಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದರು. ಈ ಎರಡೂ ಪ್ರದೇಶಗಳನ್ನು ಪ್ಲಾಸ್ಟಿಕ್‌ಮುಕ್ತ ಪ್ರದೇಶವೆಂದು ಘೋಷಿಸಲಾಗಿದ್ದು, ಈ ಬಗ್ಗೆ ಅಲ್ಲಲ್ಲಿ ಸೂಚನಾ ಫಲಕಗಳನ್ನು ಅಳವಡಿಸುವಂತೆ ನಿರ್ದೇಶನ ನೀಡಿದರು.

<><*<><>*><>

ಕೊಪ್ಪಳ ಜಿಲ್ಲೆಯಲ್ಲಿ ಬಾಲಕಾರ್ಮಿಕ ಹಾಗೂ ಕಿಶೋರ ಕಾರ್ಮಿಕ ಪದ್ಧತಿಯನ್ನು ಸಂಪೂರ್ಣವಾಗಿ ನಿರ್ಮೂಲನೆ ಮಾಡಲು ಎಲ್ಲಾ ಇಲಾಖೆಗಳು ಸಮನ್ವಯತೆಯಿಂದ ಕೆಲಸ ಮಾಡಬೇಕು ಮತ್ತು ಕಾನೂನು ಉಲ್ಲಂಘಿಸುವವರ ವಿರುದ್ಧ ಕಟ್ಟುನಿಟ್ಟಿನ ಕ್ರಮ ಜರುಗಿಸಬೇಕು ಎಂದು ಜಿಲ್ಲಾಧಿಕಾರಿ ಡಾ.ಸುರೇಶ ಬಿ.ಇಟ್ನಾಳ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಬಾಲಕಾರ್ಮಿಕ ಪದ್ಧತಿ ನಿರ್ಮೂಲನಾ ಕ್ರಿಯಾ

ಯೋಜನೆಯ ಅನುಷ್ಠಾನ ಪ್ರಗತಿ ಪರಿಶೀಲನೆ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಹೋಟೆಲ್‌ಗಳು, ಗ್ಯಾರೇಜ್‌ಗಳು, ಇಟ್ಟಿಗೆ ಭಟ್ಟಿಗಳು, ವಾಣಿಜ್ಯ ಸಂಕೀರ್ಣಗಳು ಹಾಗೂ ಕೈಗಾರಿಕಾ ಪ್ರದೇಶಗಳಲ್ಲಿ ದಿಢೀರ್ ದಾಳಿ ನಡೆಸಿ ಪರಿಶೀಲಿಸಬೇಕು. ದಾಳಿಯ ಸಂದರ್ಭದಲ್ಲಿ ರಕ್ಷಿಸಲ್ಪಟ್ಟ ಬಾಲಕಾರ್ಮಿಕರಿಗೆ ಸೂಕ್ತ ಉಚಿತ ಶಿಕ್ಷಣ, ವಸತಿ ಹಾಗೂ ಸರ್ಕಾರಿ ಸೌಲಭ್ಯಗಳ ಮೂಲಕ ಗೌರವಾನ್ವಿತ ಪುನರ್ವಸತಿ ಕಲ್ಪಿಸುವುದು ಅತೀ ಮುಖ್ಯ. ಸಾರ್ವಜನಿಕರಲ್ಲಿ ಮತ್ತು ಮಾಲೀಕರಲ್ಲಿ ಬಾಲಕಾರ್ಮಿಕ ಕಾಯ್ದೆಯ ಬಗ್ಗೆ ಅರಿವು ಮೂಡಿಸಲು ಜನದಟ್ಟಣೆ ಇರುವ ಪ್ರದೇಶಗಳಲ್ಲಿ ಬ್ಯಾನರ್ ಹಾಗೂ ಕರಪತ್ರಗಳನ್ನು ಹಂಚುವುದು, ಡಂಗೂರ ಸಾರುವುದರ ಮೂಲಕ ವ್ಯಾಪಕ ಜಾಗೃತಿ ಮೂಡಿಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದ್ದಾರೆ.

**<><*<><>*><>**

ಬೆಂಗಳೂರು ಪೂರ್ವ ನಗರ ಪಾಲಿಕೆ ವ್ಯಾಪ್ತಿಯ ವಿವಿಧ ಪ್ರದೇಶಗಳಿಗೆ ಆಯುಕ್ತ ಡಿ.ಎಸ್. ರಮೇಶ್ ಇಂದು ಭೇಟಿ ನೀಡಿ ಸರ್ಕಾರಿ ಮತ್ತು ನಗರ ಪಾಲಿಕೆ ಸ್ವತ್ತುಗಳ ಸಂರಕ್ಷಣೆ, ಅತಿಕ್ರಮಣ ತೆರವು ಕುರಿತಂತೆ ಸ್ಥಳ ಪರಿಶೀಲನೆ ನಡೆಸಿದರು. ಮೂಲಸೌಕರ್ಯ ಅಭಿವೃದ್ಧಿ ಕಾಮಗಾರಿಗಳಿಗೆ ವೇಗವರ್ಧನೆ ಹಾಗೂ ವಿವಿಧ ಇಲಾಖೆಗಳ ನಡುವೆ ಸಮನ್ವಯದ ಕುರಿತು ಅಧಿಕಾರಿಗಳಿಗೆ ಸೂಚನೆಗಳನ್ನು ನೀಡಿದರು.

**<><*<><>*><>**

ಬೆಂಗಳೂರು ಉತ್ತರ ನಗರ ಪಾಲಿಕೆ ವ್ಯಾಪ್ತಿಯ ಜಕ್ಕೂರು ಕೆರೆಯಲ್ಲಿ ವುಡನ್ ವಾಕ್‌ವೇ ನಿರ್ಮಾಣ ಮಾಡುವಂತೆ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಜಕ್ಕೂರು ಕೆರೆ, ರೈಲ್ವೆ ಮೇಲ್ಸೇತುವೆ ಕಾಮಗಾರಿ ಹಾಗೂ ಸುತ್ತಮುತ್ತಲಿನ ಪ್ರದೇಶಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದ ವೇಳೆ ಮಾತನಾಡಿದ ಅವರು, ಕೆರೆಯ ರೈಲ್ವೇ ಹಳಿ ಸಮೀಪದ ಭಾಗದಲ್ಲಿ ಪಾದಚಾರಿ ಸೇತುವೆ ನಿರ್ಮಿಸುವ ಸಂಬಂಧ ಜಲಮಂಡಳಿ ಅಧಿಕಾರಿಗಳು ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ನಿರ್ದೇಶನ ನೀಡಿದರು.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೮.೩೫ ಕ್ಕೆ <>*><>